ದಿನಾಂಕಃ 23-02-2023 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋದಿಸಲಾಯಿತು.

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆಸಿದ ವಿಷಯಗಳು ನಿಜ ಇರುತ್ತವೆ. ಅದಕ್ಕೆ ನಾನೇ ಸಹಿ ಮಾಡಿರುತ್ತೇನೆ.

ಮುಂದುವರೆದ ಮುಖ್ಯ ವಿಚಾರಣೆಃ ವಾದಿ ಪರ ವಕೀಲರಿಂದ

ಒಂದು ಮ್ಯೂಟೇಶನನ್ನು ಹಾಜರಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ಸಿಎಮ್‌ಸಿ ರವರು ನೀಡಿದ ಒಂದು ಖಾತಾ ಎಕ್ಸ್ಟ್ರಾಕ್ಟ್ ನ್ನು ಹಾಜರಪಡಿಸಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ಒಂದು ಇ-ಸ್ವತ್ತನ್ನು ಹಾಜರಪಡಿಸಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಯಿತು. ಸರ್ವೇ ನಂ. 715/ಅ ನ ಕೈಬರಹ ಪಹಣಿಯ ದೃಢೀಕೃತ ನಕಲನ್ನು ಹಾಜರಪಡಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಯಿತು. ಆರು ಭಾವಚಿತ್ರಗಳನ್ನು ಮತ್ತು ಅವುಗಳ ಸಿಡಿಯನ್ನು, ರಶೀದಿ ಮತ್ತು ಪ್ರಮಾಣ ಪತ್ರಗಳನ್ನು ಹಾಜರಪಡಿಸಿದ್ದು ಅವುಗಳನ್ನು ನಿಪಿ-5 ರಿಂದ 11 ಎಂದು ಮತ್ತು ಸಿಡಿಗಳನ್ನು ನಿಪಿ-5 ಎ ದಿಂದ 10 ಎ ಎಂದು ಗುರುತಿಸಲಾಯಿತು. ಅದೇರೀತಿ ಇನ್ನು ಎರಡು ಭಾವಚಿತ್ರಗಳನ್ನು ಮತ್ತು ಎರಡು ರಶೀದಿಗಳನ್ನು ಹಾಜರಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-12 ರಿಂದ 15 ಎಂದು ಗುರುತಿಸಲಾಯಿತು.

ವಾದಿ ಪರ ವಕೀಲರು ಮುಂದುವರೆದ ಮುಖ್ಯ ವಿಚಾರಣೆಗಾಗಿ ಸಮಯ ಕೋರಿದ್ದು, ಅವರ ಕೋರಿಕೆಯಂತೆ ಮುಂದೂಡಲಾಯಿತು.

(ನನ್ನ ಉಕ್ತದ ಹೇಳಿಕೆಯಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿರುತ್ತಾರೆ)

ಓ ಹೇ ಕೇ ಸರಿ ಇದೆ.

ಪ್ರಧಾನ ಜೆ.ಎಮ್.ಎಫ್.ಸಿ., ಸಿಂಧನೂರು.